# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2354 |
| ಸದಸ್ಯರು ಹೆಸರು | : | ಶ್ರೀ ಪಿ.ಹೆಚ್. ಪೂಜಾರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27.03.2026 |
| ಉತ್ತರಿಸುವ ಸಚಿವರು | : | ಗೃಹ ಸಚಿವರು. |

<table>
<tr><th>ಕ್ರಸ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಪ್ರತಿ ಆರು ಮಕ್ಕಳಲ್ಲಿ ಓರ್ವ ಮಗು ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆಗೆ ಒಳಗಾಗುತ್ತಿರುವ ಆಘಾತಕಾರಿ ಅಂಶ ಪಾಲಕರ ಆತಂಕ ಮತ್ತು ಕಳವಳಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆಗೆ ಒಳಗಾಗುತ್ತಿರುವುದನ್ನು ತಡೆಗಟ್ಟುವ ಸಲುವಾಗಿ ಜನಸಂಪರ್ಕ ಸಭೆ, ಮನೆ-ಮನೆಗೆ ಪೊಲೀಸ್ ಎಂಬ ಕಾರ್ಯಕ್ರಮದಡಿಯಲ್ಲಿ ಮಕ್ಕಳ ಪಾಲಕರಿಗೆ ತಿಳುವಳಿಕೆ ಮೂಡಿಸುವುದು ಮತ್ತು ಹಾಗೇನಾದರೂ ಆನ್‌ಲೈನ್ ಗೇಮ್‌ಗಳಿಂದ ಆತಂಕಕ್ಕೆ ಒಳಗಾದಲ್ಲಿ ತಕ್ಷಣವೇ ಟೋಲ್ ಫ್ರೀ ನಂಬರ್ 1930 ಮಕ್ಕಳ ಸಹಾಯವಾಣಿ 1098ಕ್ಕೆ ಕರೆ ಮಾಡಿ ರಕ್ಷಣೆ ಪಡೆಯುವಂತ ಮತ್ತು ಮಕ್ಕಳು ಸಂದಿಗ್ಧ ಪರಿಸ್ಥಿತಿಯಲ್ಲಿ ಸಿಲುಕಿಕೊಂಡಾಗ, ಟೋಲ್ ಫ್ರೀ ನಂಬರ್ 14416 ಕ್ಕೆ ಸಂಪರ್ಕಿಸಿ ಮಾನಸಿಕ ಬೆಂಬಲ ಮತ್ತು ಮಾನಸಿಕ ಆರೋಗ್ಯ ಸಮಾಲೋಚನೆ ಪಡೆಯುವಂತ ತಿಳುವಳಿಕೆ ನೀಡುತ್ತಾ ಬಂದಿದೆ.</td></tr>
<tr><td>ಆ</td><td>ಬಂದಿದ್ದಲ್ಲಿ, ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಮಕ್ಕಳು ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆಗೆ ಒಳಗಾಗಿರುವ ಎಷ್ಟು ಪ್ರಕರಣಗಳು ವರದಿಯಾಗಿದೆ; ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು;</td><td>ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಮಕ್ಕಳು ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆಗೆ ಒಳಗಾಗಿರುವ ಪ್ರಕರಣಗಳ ಅಂಕಿ-ಅಂಶ ಕೆಳಗಿನಂತಿದೆ.
<table>
<tr><th rowspan="2">ಘಟಕ</th><th colspan="3">ವರ್ಷ</th></tr>
<tr><th>2024</th><th>2025</th><th>2026</th></tr>
<tr><td>ಬೆಂಗಳೂರು ನಗರ</td><td>0</td><td>1</td><td>0</td></tr>
</table>
</td></tr>
<tr><td>ಇ</td><td>ಹೆಚ್ಚಾದ ಡಿಜಿಟಲ್ ತೊಡಗಿಸಿಕೊಳ್ಳುವಿಕೆ ಮಕ್ಕಳನ್ನು ಲೈಂಗಿಕ ಶೋಷಣೆ ಮತ್ತು ನಿಂದನೆ ಸೇರಿ ಗಮನಾರ್ಹ ಅಪಾಯಗಳಿಗೆ ಒಡ್ಡುತ್ತಿದ್ದು, ಮಕ್ಕಳನ್ನು ಹಾನಿಯಿಂದ - ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು;</td><td>ಡಿಜಿಟಲ್ ತೊಡಗಿಸಿಕೊಳ್ಳುವಿಕೆಯಲ್ಲಿ ಮಕ್ಕಳನ್ನು ಲೈಂಗಿಕ ಶೋಷಣೆ ಮತ್ತು ನಿಂದನೆ ಸೇರಿ ಗಮನಾರ್ಹ ಅಪಾಯಗಳಿಂದ ಮಕ್ಕಳನ್ನು ರಕ್ಷಿಸುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.<br><br>➢ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವಿಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.<br><br>➢ ಸೈಬರ್ ಜಾಗೃತಿ ಸಪ್ತಾಹವನ್ನು ಆಚರಿಸುವ ಮೂಲಕ ಕರಪತ್ರಗಳನ್ನು ಮುದ್ರಿಸಿ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಅರಿವನ್ನು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ನಿರಂತರವಾಗಿ ಪೊಲೀಸ್ ಅಧಿಕಾರಿ/ಸಿಬ್ಬಂದಿಯವರು ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಹೆಚ್ಚಾಗುತ್ತಿರುವ ಆನ್ ಲೈನ್ (ಡಿಜಿಟಲ್) ಬೆದರಿಕೆಗಳ ಬಗ್ಗೆ, ಆನ್‌ಲೈನ್ ವಂಚನೆ ಪ್ರಕರಣಗಳ ಬಗ್ಗೆ, ಮಕ್ಕಳಿಗೆ ಇಂಟರ್‌ನೆಟ್ ಬಳಸುವಾಗ ಎದುರಾಗುವ ಅಪಾಯಗಳ ಬಗ್ಗೆ ಅರಿವು ಮೂಡಿಸಲು ಮತ್ತು ಸುರಕ್ಷಿತ ಅಂತರ್‌ಜಾಲ ಬಳಕೆಯನ್ನು ಉತ್ತೇಜಿಸಲು ಮಕ್ಕಳಲ್ಲಿ ಜಾಗೃತಿ</td></tr>
</table>

ಮೂಡಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ.

- ಅಧಿಕಾರಿ ಮತ್ತು ಸಿಬ್ಬಂದಿಗಳು ಶಾಲಾ ಕಾಲೇಜುಗಳಿಗೆ ಪ್ರತಿ ತಿಂಗಳು ಭೇಟಿ ನೀಡಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಹಾಗೂ ಶಾಲಾ ಆಡಳಿತ ಮಂಡಳಿಯ ಸಿಬ್ಬಂದಿಗೆ ಶಾಲಾ ಮಕ್ಕಳ ಪೋಷಕರಿಗೆ ಸಭೆ ಕರೆದಾಗ ಮಕ್ಕಳಿಗೆ ಮೊಬೈಲ್ ನೀಡದಂತೆ ಪೋಷಕರಿಗೆ ತಿಳುವಳಿಕೆ ನೀಡಲು ಸೂಚಿಸಲಾಗಿದೆ.

- ಪ್ರತಿ ಗುರುವಾರ ತೆರೆದ ಮನೆ ಕಾರ್ಯಕ್ರಮ ಮೂಲಕ ಮಕ್ಕಳಿಗೆ ಮೊಬೈಲ್ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

- "ಅಕ್ಕಪಡೆ"ಯ ಮೂಲಕ ಶಾಲಾ ಕಾಲೇಜುಗಳಿಗ ಭೇಟಿ ನೀಡಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

- ಮಕ್ಕಳಿಗೆ ಆನ್‌ಲೈನ್ ಅಪಾಯಗಳ ಕುರಿತು ಅರಿವು ಮೂಡಿಸಲು ಜಾಗೃತಿ ಅಭಿಯಾನಗಳು, ಕಾರ್ಯಾಗಾರಗಳು ಮತ್ತು ಸಮುದಾಯ ಮಟ್ಟದ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.

- ಆನ್‌ಲೈನ್ (ಡಿಜಿಟಲ್) ಬೆದರಿಕೆಗಳ ಬಗ್ಗೆ ಆದರ ಪರಿಣಾಮಗಳ ಬಗ್ಗೆ ಮತ್ತು ಇಂತಹ ಸಂದರ್ಭಗಳಲ್ಲಿ ದೂರು ನೀಡಲು ಮಕ್ಕಳ ಸಹಾಯವಾಣಿ 1930 & 1098 ಮತ್ತು ಸುರಕ್ಷತಾ ಕ್ರಮಗಳ ಬಗ್ಗೆ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ "ಕಾನೂನು ಅರಿವು ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುತ್ತಿದೆ.

- ಆನ್‌ಲೈನ್ ಸುರಕ್ಷತೆಯ ಬಗ್ಗೆ ಸ್ಪರ್ಧೆಗಳನ್ನು ಆಯೋಜಿಸಿ, ಮಕ್ಕಳಲ್ಲಿ ಆನ್‌ಲೈನ್ ಸುರಕ್ಷತೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

- 'ಮೊಬೈಲ್ ಬಿಡಿ, ಪುಸ್ತಕ ಹಿಡಿ' ಅಭಿಯಾನ: ಮಕ್ಕಳಲ್ಲಿ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಓದುವ ಹವ್ಯಾಸ ಮತ್ತು ದೈಹಿಕ ಚಟುವಟಿಕೆಗಳನ್ನು ಉತ್ತೇಜಿಸಲು ಈ ಅಭಿಯಾನವನ್ನು ಪ್ರಾರಂಭಿಸಲಾಗಿದೆ.

- ಡಿಜಿಟಲ್ ನಾಗರಿಕ್ (Digital Nagarik): ಐಟಿ-ಬಿಟಿ ಇಲಾಖೆಯು ಮೆಟಾ (Meta) ಸಂಸ್ಥೆಯ ಸಹಯೋಗದೊಂದಿಗೆ ಶಿಕ್ಷಕರಿಗೆ ಡಿಜಿಟಲ್ ಸುರಕ್ಷತೆ ಮತ್ತು ಸೈಬರ್ ಸುರಕ್ಷತೆಯ ಬಗ್ಗೆ ತರಬೇತಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

- ಪೋಷಕರಿಗೆ ಮತ್ತು ಶಿಕ್ಷಕರಿಗೆ ಸಲಹೆಗಳು :- ಪೋಷಕರು ಮಕ್ಕಳ ಮೊಬೈಲ್ ಬಳಕೆಯ ಮೇಲೆ ನಿಗಾ ಇಡಲು ಆಧಾರ್ ಆಧಾರಿತ ಮಾನಿಟರಿಂಗ್ ಆಪ್‌ಗಳನ್ನು ಬಳಸಲು ಉತ್ತೇಜಿಸಲಾಗುತ್ತಿದೆ.

- ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಸೈಬರ್ ಕ್ರೈಂ ಕುರಿತು ಅರಿವು ಮೂಡಿಸಲು ಟಿ.ವಿ ಮಾಧ್ಯಮ, ದಿನ ಪತ್ರಿಕೆ, ಫೇಸ್‌ಬುಕ್ ಹಾಗೂ ಬ್ಯಾಂಕ್ ಅಧಿಕಾರಿಗಳ ಸಹಭಾಗಿತ್ವದಲ್ಲಿ ಮತ್ತು ಪೊಲೀಸ್ ಇಲಾಖೆಯ ಟ್ವೀಟರ್ ಮೂಲಕ ಜನರಿಗೆ ಸೈಬರ್ ಅಪರಾಧಗಳ ಕುರಿತು ಮುಂಜಾಗ್ರತೆ ಕ್ರಮಗಳ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ.

- ಇಂಟರ್‌ನೆಟ್/ಮೊಬೈಲ್ ಫೋನ್/ ಆನ್‌ಲೈನ್ ಮೂಲಕ & ಸಾಮಾಜಿಕ ಜಾಲತಾಣಗಳಲ್ಲಿ ವಂಚನೆಗೊಳಗಾಗುತ್ತಿರುವ

| | | |
|---|---|---|
| | | ಅಪರಾಧ ಪ್ರಕರಣಗಳನ್ನು ಮಾಹಿತಿ ತಂತ್ರಜ್ಞಾನ ಕಾಯ್ದೆ, ಬಿಎನ್‌ಎಸ್ ಕಾಯ್ದೆ ಮತ್ತು ಕೆಪಿ ಆಕ್ಟ್ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸಾಮಾಜಿಕ ಜಾಲತಾಣಗಳಾದ ಸೈಬರ್ ಠಾಣೆಯ ಎಕ್ಸ್ ಖಾತೆ, ಫೇಸ್ ಬುಕ್ ಖಾತೆಗಳಲ್ಲಿ ಆನ್‌ಲೈನ್ ವಂಚನೆಯ ಬಗ್ಗೆ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವ ಬಗ್ಗೆ ಪೋಸ್ಟ್‌ಗಳನ್ನು / ಜಾಹಿರಾತುಗಳನ್ನು ಪೋಸ್ಟ್ ಮಾಡಿ ಜಾಗೃತಿ ಮೂಡಿಸಲಾಗುತ್ತಿದೆ.<br>➢ ಮಕ್ಕಳಿಗೆ ಮೊಬೈಲ್‌ಗಳನ್ನು ನೀಡದಂತೆ ಹಾಗೂ ಮಕ್ಕಳು ಮೊಬೈಲ್ ಬಳಕೆಯ ಸಂದರ್ಭದಲ್ಲಿ ಅವರುಗಳ ಮೇಲೆ ನಿಗಾವಣೆ ವಹಿಸುವಂತೆ ಪೋಷಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. |
| ಈ | ಮಕ್ಕಳು ಬಳಸುವ ಮೊಬೈಲ್‌ಗಳಲ್ಲಿ ಅಸುರಕ್ಷಿತ, ಅಶ್ಲೀಲ APP ಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲೇಬೇಕಾದ ತುರ್ತು ಅನಿವಾರ್ಯತೆ ಸೃಷ್ಟಿಯಾಗಿದ್ದು, ಈ ಕುರಿತು ಸರ್ಕಾರ ವಹಿಸಿರುವ ಕ್ರಮಗಳೇನು; | ಮಕ್ಕಳು ಬಳಸುವ ಮೊಬೈಲ್‌ಗಳಲ್ಲಿ ಅಸುರಕ್ಷಿತ, ಅಶ್ಲೀಲ APP ಗಳಲ್ಲಿ ಅಶ್ಲೀಲತೆ, ಮಕ್ಕಳ ನಗ್ನ ಚಿತ್ರಗಳು ಮುಂತಾದ ಆಕ್ಷೇಪಾರ್ಹ ಪೋಸ್ಟ್‌ಗಳು ಕಂಡುಬಂದಲ್ಲಿ ಅಂತಹ ಪೋಸ್ಟ್‌ಗಳನ್ನು ಕೂಡಲೇ ತೆರವುಗೊಳಿಸುವ ಮತ್ತು ಅಂತಹ ಪೋಸ್ಟ್ ಮಾಡಿರುವ ಖಾತೆಗಳನ್ನು ನಿಷ್ಕ್ರಿಯಗೊಳಿಸಲು The Information Technology Act, 2000 and the Information Technology (Intermediary Guidelines and Digital Media Ethics Code) Rules, 2021ರಡಿ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಉ | ಮಕ್ಕಳ ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆ ತಡೆಗೆ ಕಾರ್ಯಪಡೆ ರಚನೆ, ಮಕ್ಕಳ ಸುರಕ್ಷತೆಯನ್ನು ಆನ್‌ಲೈನ್‌ನಲ್ಲಿ ಖಚಿತಪಡಿಸಿಕೊಳ್ಳಲು ಜಾಗೃತಿ ಮೂಡಿಸುವುದು, ಡಿಜಿಟಲ್ ಸಾಕ್ಷರತೆ ಸೇರಿದಂತೆ ಮಕ್ಕಳಿಗೆ ಅತ್ಯಂತ ಸುರಕ್ಷಿತ ಡಿಜಿಟಲ್ ಪರಿಸರವನ್ನು ಸೃಷ್ಟಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಅಗತ್ಯ ಹಾಗೂ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವುದು? | ರಾಜ್ಯದಲ್ಲಿ ಇಂಟರ್‌ನೆಟ್ ಮೊಬೈಲ್ ಫೋನ್ ಆನ್‌ಲೈನ್ ಗೇಮ್, ವಂಚನೆ ಮತ್ತು ಆನ್‌ಲೈನ್ ಶೋಷಣೆ ಮುಂತಾದ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ದಿನ ದಾಖಲಾಗುವ ಪ್ರಕರಣಗಳನ್ನು ಶೀಘ್ರವಾಗಿ ವಿಚಾರಣೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ / 177/ಪಿಓಪಿ/2024, ದಿನಾಂಕ:01/08/2025 ರಲ್ಲಿ ರಾಜ್ಯದ 45 CEN ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದು Cyber Crime Police Station ಎಂದು ಮರು ಪದನಾಮೀಕರಿಸಿ ಆದೇಶಿಸಿದೆ.<br><br>ಸೈಬರ್ ಅಪರಾಧ ಪೊಲೀಸ್ ಠಾಣೆಗಳಲ್ಲಿ Information Technology Act -2000 & IPC/BNS ಅಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ದಾಖಲಿಸಲು ಹಾಗೂ ತನಿಖೆ ಕೈಗೊಳ್ಳಲು ಅಧಿಕಾರ ನೀಡಿ, ವ್ಯಾಪ್ತಿ ನಿಗಧಿಪಡಿಸಿ ಅಧಿಸೂಚಿಸಲಾಗಿದೆ.<br>➢ ರಾಜ್ಯದಲ್ಲಿ DGP ಸೈಬರ್ ಕಮಾಂಡ್ ಹುದ್ದೆ ಸೃಜಿಸಲಾಗಿದೆ. ಇವರು ಸೈಬರ್ ಕ್ರೈಂ ಪೊಲೀಸ್ ಠಾಣೆಗಳ ಕಮಾಂಡಿಂಗ್ ಅಧಿಕಾರಿಯಾಗಿರುತ್ತಾರೆ. ಎಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆಗಳು ನೇರವಾಗಿ ಇವರಿಗೆ ಕಾರ್ಯ ವರದಿ ಸಲ್ಲಿಸಿಕೊಂಡು ಕರ್ತವ್ಯ ನಿರ್ವಹಿಸುತ್ತಿರುತ್ತವೆ. ಈ ಕ್ರಮದಿಂದ ಸೈಬರ್ ಅಪರಾಧಗಳ ತನಿಖಾ ವೇಗ ಹೆಚ್ಚಲಿದೆ.<br>➢ ಭಾರತದ ಪ್ರಥಮ ವಿಶೇಷ ಸೈಬರ್ ಪೊಲೀಸ್ ಠಾಣೆಯನ್ನು 2001ರಲ್ಲಿ ಬೆಂಗಳೂರು ನಗರದಲ್ಲಿ ಸ್ಥಾಪಿಸಲಾಗಿರುತ್ತದೆ. |

ಹೆಚ್‌ಡಿ 218 ಎಸ್‌ಎಸ್‌ಟಿ 2026

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು.